ಕರ್ನಾಟಕ ಸರ್ಕಾರ
ಸಹಕಾರ ಚುನಾವಣಾ ಪ್ರಾಧಿಕಾರ

ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಡಿಸೆಂಬರ್/06/2017

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027
ದಿನಾಂಕ: 01.08.2017

# ಅಧಿಸೂಚನೆ

**ವಿಷಯ:-** ದಿನಾಂಕ 01.01.2018 ರಿಂದ 31.12.2018 ರವರೆಗೆ ಅವಧಿ ಮುಗಿಯಲಿರುವ ಪ್ರಾಥಮಿಕ ಹಂತದ ಸಹಕಾರ ಸಂಘಗಳ ಮತ್ತು ಸಹಕಾರಿಗಳ ಆಡಳಿತ ಮಂಡಲಿಗೆ ಚುನಾವಣೆ ಹಾಗೂ ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸುವ ಕುರಿತು.

**ಉಲ್ಲೇಖ:-** 1. ಸಹಕಾರ ಚುನಾವಣಾ ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ:ಸಚುಪ್ರಾ/ಚುನಾವಣೆ/01/2016 ದಿನಾಂಕ:18.10.2016

★★★

ದಿನಾಂಕ 01.01.2017 ರಿಂದ 31.12.2017 ರವರೆಗೆ ಅವಧಿ ಮುಗಿಯಲಿರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಹಕಾರ ಸಂಘಗಳ ಮತ್ತು ಸಹಕಾರಿಗಳ ಆಡಳಿತ ಮಂಡಲಿಗೆ ಚುನಾವಣೆ ಹಾಗೂ ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸಲು ಉಲ್ಲೇಖಿತ ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಮುಂದುವರೆದು, **ಜನವರಿ 2018 ರಿಂದ ಡಿಸೆಂಬರ್-2018ರ** ಒಳಗಾಗಿ ಅವಧಿ ಮುಗಿಯಲಿರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಹಕಾರ ಸಂಘಗಳ / ಸಹಕಾರಿಗಳ ಆಡಳಿತ ಮಂಡಲಿಗಳ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆಗಳನ್ನು ನಿಯಮಾನುಸಾರ ನಡೆಸಬೇಕಾದ ದಿನಾಂಕಗಳ ಹಿನ್ನೆಲೆಯಲ್ಲಿ, ಸಹಕಾರ ಚುನಾವಣಾ ಪ್ರಾಧಿಕಾರವು ಪ್ರಾಥಮಿಕ ಹಂತದ ಎಲ್ಲಾ ರೀತಿಯ ಸಹಕಾರ ಸಂಘಗಳ / ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಯನ್ನು ನಡೆಸಲು ಈ ಅಧಿಸೂಚನೆಗೆ ಲಗತ್ತಿಸಿರುವ **ಅನುಬಂಧ-01ರಂತೆ** ಗೊತ್ತುಪಡಿಸಲಾದ ದಿನಾಂಕಗಳಂದು ಚುನಾವಣೆ ನಡೆಸಲು, ಪ್ರಾಧಿಕಾರದಿಂದ ನೇಮಕಾತಿಮಾಡಲ್ಪಟ್ಟ ಚುನಾವಣಾಧಿಕಾರಿಗಳು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳತಕ್ಕದ್ದೆಂದು ಈ ಮೂಲಕ ಸೂಚಿಸಲಾಗಿದೆ.

ಚುನಾವಣಾಧಿಕಾರಿಗಳು/ರಿಟರ್ನಿಂಗ್ ಅಧಿಕಾರಿಗಳು ಚುನಾವಣೆ ನಡೆಸುವ ಸಂಬಂಧ ವಿವಿಧ ಹಂತಗಳಲ್ಲಿ ನಿಯಮಾನುಸಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಈ ಅಧಿಸೂಚನೆಗೆ ಲಗತ್ತಿಸಿರುವ ಚೆಕ್‌ಲಿಸ್ಟ್‌ನ (**ಅನುಬಂಧ-02**)ರ ಸೂಚನೆಗಳನ್ನು ತಪ್ಪದೇ ಅನುಸರಿಸತಕ್ಕದ್ದು.

ಚುನಾವಣೆ ನಡೆಸಿದ ಕೂಡಲೇ ಪ್ರತಿ ಸಂಘದ / ಸಹಕಾರಿಯ ಆಡಳಿತ ಮಂಡಲಿ ಚುನಾವಣಾ ಫಲಿತಾಂಶ ಮತ್ತು ಪದಾಧಿಕಾರಿಗಳ ಫಲಿತಾಂಶಗಳನ್ನು ಚುನಾವಣಾಧಿಕಾರಿಗಳು ಪ್ರಾಧಿಕಾರಕ್ಕೆ ತಕ್ಷಣವೇ ವರದಿ ಮಾಡತಕ್ಕದ್ದು.

**ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಇ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ 5ಸಿ ರಂತೆ** ಪ್ರಾಧಿಕಾರದಿಂದ ನೇಮಕಾತಿಮಾಡಲ್ಪಟ್ಟ ಚುನಾವಣಾಧಿಕಾರಿಗಳು ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಳಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ, ಆಕಸ್ಮಿಕವಾಗಿ ತೆರವಾದ ಮತ್ತು ಆಡಳಿತಾಧಿಕಾರಿ /ವಿಶೇಷಾಧಿಕಾರಿ ನೇಮಕಗೊಂಡ ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆಗಳನ್ನು ನಡೆಸಲು ಚುನಾವಣಾಧಿಕಾರಿಯು ರಿಟರ್ನಿಂಗ್ ಅಧಿಕಾರಿ ಮತ್ತು ಅಗತ್ಯವಿರುವಂತೆ ಒಬ್ಬ ಅಥವಾ ಹೆಚ್ಚು ಮಂದಿ ಸಹಾಯಕ ರಿಟರ್ನಿಂಗ್ ಅಧಿಕಾರಿಗಳನ್ನು **randomization** ಮುಖಾಂತರ ನೇಮಕಾತಿ ಮಾಡತಕ್ಕದ್ದು.

ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆ ನಡೆಸುವ ಸಂಬಂಧ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ / ನಿಯಮಗಳು ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ/ನಿಯಮಗಳು ಹಾಗೂ ಸಹಕಾರ ಸಂಘಗಳ/ಸಹಕಾರಿಗಳ ಬೈಲಾಗಳಿಗೆ ಅನುಗುಣವಾಗಿ ಸರಿಯಾದ ಮತದಾರರ ಪಟ್ಟಿಯನ್ನು ತಯಾರಿಸಲು ಮತ್ತು ಚುನಾವಣೆಯನ್ನು ನಿಯಮಾನುಸಾರ, ನಿಷ್ಪಕ್ಷಪಾತವಾಗಿ ಮತ್ತು ಪಾರದರ್ಶಕವಾಗಿ ಸಕಾಲಕ್ಕೆ ನಡೆಸುವ ಬಗ್ಗೆ ಸಹಕಾರ ಸಂಘಗಳ/ಸಹಕಾರಿಗಳ ಆಡಳಿತ ಮಂಡಲಿಗಳು ಮತ್ತು ಮುಖ್ಯಕಾರ್ಯನಿರ್ವಹಣಾಧಿಕಾರಿಗಳು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ / ನಿಯಮಗಳಂತೆ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ/ನಿಯಮಗಳಂತೆ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳಿಗೆ ಮತ್ತು ರಿಟರ್ನಿಂಗ್ ಆಫೀಸರ್‌ಗಳಿಗೆ ಅಗತ್ಯ ದಾಖಲಾತಿಗಳನ್ನು ಹಾಜರುಪಡಿಸಿ, ಮಾಹಿತಿಗಳನ್ನು ಒದಗಿಸುವ ಮುಖಾಂತರ ಚುನಾವಣೆಗಳನ್ನು ಸರಳ ರೀತಿಯಲ್ಲಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

ಮುಖ್ಯವಾಗಿ, ಚುನಾವಣಾಧಿಕಾರಿಗಳು ಈ ಕೆಳಕಂಡಂತೆ ಪ್ರಾಧಿಕಾರಕ್ಕೆ ಮಾಹಿತಿ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ತಪ್ಪಿದಲ್ಲಿ ಸಹಕಾರ ಸಂಘಗಳ ನಿಬಂಧಕರಿಗೆ ಮತ್ತು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ವರದಿ ಮಾಡಲು ಕ್ರಮವಿಡಲಾಗುವುದು.

1. ಪದಾವಧಿಯು ಮುಕ್ತಾಯವಾಗುವ 120 ದಿನಗಳ ಪೂರ್ವದಲ್ಲಿ ಪ್ರಾಧಿಕಾರವು ನೀಡಿರುವ 13ಡಿ ನಮೂನೆಯಲ್ಲಿ ಹಾಗೂ 7ಎ ರಿಂದ 7ಡಿ ರಲ್ಲಿ ಮಾಹಿತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
2. ಚುನಾವಣಾ ದಿನಾಂಕಕ್ಕೆ 45 ದಿನಗಳ ಪೂರ್ವದಲ್ಲಿ ಹೊರಡಿಸತಕ್ಕ ಕರಡು ಮತದಾರರ ಪಟ್ಟಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
3. ಚುನಾವಣಾ ದಿನಾಂಕಕ್ಕೆ 15 ದಿನಗಳ ಪೂರ್ವದಲ್ಲಿ ಹೊರಡಿಸತಕ್ಕ ಅಂತಿಮ ಮತದಾರರ ಪಟ್ಟಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
4. ಸಂಘಗಳ/ಸಹಕಾರಿಗಳ ಕಾರ್ಯವ್ಯಾಪ್ತಿಗನುಗುಣವಾಗಿ ರಿಟರ್ನಿಂಗ್ ಅಧಿಕಾರಿಗಳನ್ನು **Randomization** ಮುಖಾಂತರ ನೇಮಿಸುವುದು ಮತ್ತು ಆದೇಶದ ಪ್ರತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.
5. ಚುನಾವಣೆ ಮುಕ್ತಾಯವಾದ ಕೂಡಲೇ ಚುನಾವಣಾ ಫಲಿತಾಂಶದ ಪ್ರತಿಗಳನ್ನು ಹಾಗೂ ನಮೂನೆ 8ಎ ರಿಂದ 8ಡಿ ರಲ್ಲಿ ಮಾಹಿತಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

**(ಎನ್.ಸಿ. ಮುನಿಯಪ್ಪ)**
**ಆಯುಕ್ತರು**
**ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು**

ಇವರಿಗೆ:-

1. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
2. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,
3. ಸಹಕಾರ ಸಂಘಗಳ ಜಂಟಿ ನಿಬಂಧಕರು(ಪಟ್ಟಣ ಬ್ಯಾಂಕುಗಳ ವಿಭಾಗ), (ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
4. ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಬೆಳಗಾವಿ
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಲಬುರಗಿ ಪ್ರಾಂತ ರಾಯಚೂರು
6. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು,

ಪ್ರತಿಗಳು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
4. ರಾಜ್ಯದ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ
5. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ

## ಅನುಬಂಧ-01

ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಡಿಸೆಂಬರ್/06/2017 ದಿನಾಂಕ: 01.08.2017

**ದಿನಾಂಕ 01.01.2018 ರಿಂದ 31.12.2018 ರವರೆಗೆ ಪದಾವಧಿ ಮುಗಿಯಲಿರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಹಕಾರ ಸಂಘಗಳಿಗೆ / ಸಹಕಾರಿಗಳಿಗೆ ಚುನಾವಣೆಯನ್ನು ನಡೆಸಲು ಗೊತ್ತುಪಡಿಸಲಾದ ದಿನಾಂಕಗಳು.**

| ಕ್ರ. ಸಂ | ಅವಧಿ ಮುಕ್ತಾಯಗೊಳ್ಳಲಿರುವ ದಿನಾಂಕ | ಚುನಾವಣೆ ನಡೆಸಬೇಕಾದ ಅವಧಿ /ದಿನಾಂಕ |
|---|---|---|
| 01 | ದಿನಾಂಕ 01.01.2018 ರಿಂದ 31.01.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 16.12.2017 / ಭಾನುವಾರ 17.12.2017 |
| | ದಿನಾಂಕ 16.12.2017 ಮತ್ತು 17.12.2017 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 24.12.2017 / ಸೋಮವಾರ 25.12.2017 |
| 02 | ದಿನಾಂಕ : 01.02.2018 ರಿಂದ 28.02.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 13.01.2018 / ಭಾನುವಾರ 14.01.2018 |
| | ದಿನಾಂಕ: 13.01.2018 ಮತ್ತು 14.01.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 28.01.2018 / ಸೋಮವಾರ 29.01.2018 |
| 03 | ದಿನಾಂಕ : 01.03.2018 ರಿಂದ 31.03.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 17.02.2018 / ಭಾನುವಾರ 18.02.2018 |
| | ದಿನಾಂಕ 17.02.2018 ಮತ್ತು 18.02.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 25.02.2018 / ಸೋಮವಾರ 26.02.2018 |

| | | |
|---|---|---|
| 04 | ದಿನಾಂಕ : 01.04.2018 ರಿಂದ 30.04.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 17.03.2018 / ಭಾನುವಾರ 18.03.2018 |
| | ದಿನಾಂಕ 17.03.2018 ಮತ್ತು 18.03.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 25.03.2018 / ಸೋಮವಾರ 26.03.2018 |
| 05 | ದಿನಾಂಕ : 01.05.2018 ರಿಂದ 31.05.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 14.04.2018 / ಭಾನುವಾರ 15.04.2018 |
| | ದಿನಾಂಕ 14.04.2018 ಮತ್ತು 15.04.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 29.04.2018 / ಸೋಮವಾರ 30.04.2018 |
| 06 | ದಿನಾಂಕ : 01.06.2018 ರಿಂದ 30.06.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 19.05.2018 / ಭಾನುವಾರ 20.05.2018 |
| | ದಿನಾಂಕ 19.05.2018 ಮತ್ತು 20.05.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 27.05.2018 / ಸೋಮವಾರ 28.05.2018 |
| 07 | ದಿನಾಂಕ : 01.07.2018 ರಿಂದ 31.07.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 16.06.2018 / ಭಾನುವಾರ 17.06.2018 |
| | ದಿನಾಂಕ 16.06.2018 ಮತ್ತು 17.06.2018ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶ ವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 24.06.2018 / ಸೋಮವಾರ 25.06.2018 |
| 08 | ದಿನಾಂಕ : 01.08.2018 ರಿಂದ 31.08.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ | ಶನಿವಾರ 14.07.2018 / ಭಾನುವಾರ 15.07.2018 |

| | | |
|---|---|---|
| | ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | |
| | ದಿನಾಂಕ 14.07.2018 ಮತ್ತು 15.07.2018 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 29.07.2018 / ಸೋಮವಾರ 30.07.2018 |
| **09** | ದಿನಾಂಕ : 01.09.2018 ರಿಂದ 30.09.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 18.08.2018 / ಭಾನುವಾರ 19.08.2018 |
| | ದಿನಾಂಕ 18.08.2018 ಮತ್ತು 19.08.2018 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 26.08.2018 / ಸೋಮವಾರ 27.08.2018 |
| **10** | ದಿನಾಂಕ : 01.10.2018 ರಿಂದ 31.10.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 15.09.2018 / ಭಾನುವಾರ 16.09.2018 |
| | ದಿನಾಂಕ 15.09.2018 ಮತ್ತು 16.09.2018 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 23.09.2018 / ಸೋಮವಾರ 24.09.2018 |
| **11** | ದಿನಾಂಕ : 01.11.2018 ರಿಂದ 30.11.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | ಶನಿವಾರ 20.10.2018 / ಭಾನುವಾರ 21.10.2018 |
| | ದಿನಾಂಕ 20.10.2018 ಮತ್ತು 21.10.2018 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 28.10.2018 / ಸೋಮವಾರ 29.10.2018 |
| **12** | ದಿನಾಂಕ : 01.12.2018 ರಿಂದ 31.12.2018 ರವರೆಗೆ ಚುನಾವಣೆ ನಡೆಸಲು ಬಾಕಿ ಇರುವ ಎಲ್ಲಾ ರೀತಿಯ | ಶನಿವಾರ 17.11.2018 / ಭಾನುವಾರ 18.11.2018 |

| | | |
|---|---|---|
| | ಪ್ರಾಥಮಿಕ ಹಂತದ ಸಂಘಗಳ/ಸಹಕಾರಿಗಳ ಚುನಾವಣೆಗಳು. | |
| | ದಿನಾಂಕ 17.11.2018 ಮತ್ತು 18.11.2018 ರಂದು ಕಾರಣಾಂತರಗಳಿಂದ ಚುನಾವಣೆ ನಡೆಸಲು ಸಾಧ್ಯವಾಗದ ಪದಾವಧಿಯೊಳಗೆ ಚುನಾವಣೆ ನಡೆಸಲು ಅವಕಾಶವಿರುವ ಸಂಘಗಳ / ಸಹಕಾರಿಗಳ ಚುನಾವಣೆಗಳು. | ಭಾನುವಾರ 25.11.2018 / ಸೋಮವಾರ 26.11.2018 |

(ಎನ್.ಸಿ. ಮುನಿಯಪ್ಪ)
ಆಯುಕ್ತರು
ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು

ಅನುಬಂಧ-02

ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಡಿಸೆಂಬರ್/06/2017 ದಿನಾಂಕ: 01.08.2017

ಪ್ರಾಥಮಿಕ ಹಂತದ ಸಹಕಾರ ಸಂಘಗಳ / ಸಹಕಾರಿಗಳ ಆಡಳಿತ ಮಂಡಲಿಗೆ / ಪದಾಧಿಕಾರಿಗಳ ಸ್ಥಾನಗಳಿಗೆ ಚುನಾವಣೆ ನಡೆಸುವ ಬಗ್ಗೆ ಚುನಾವಣಾಧಿಕಾರಿಗಳು ಕೈಗೊಳ್ಳಬಹುದಾದ ಕ್ರಮ ಕುರಿತಂತೆ ಚೆಕ್‌ಲಿಸ್ಟ್.

| ಕ್ರ ಸಂ | ವಿವರ | ಷರಾ |
|---|---|---|
| 1 | ದಿನಾಂಕ 01.01.2018 ರಿಂದ 31.12.2018 ರವರೆಗೆ ಅವಧಿ ಮುಗಿಯುವ ಸಹಕಾರ ಸಂಘಗಳ ಆಡಳಿತ ಮಂಡಲಿಗೆ ಚುನಾವಣೆ / ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸುವಿಕೆ – ಸಹಕಾರ ಸಂಘಗಳ /ಸಹಕಾರಿಗಳ ಪಟ್ಟಿಯನ್ನು ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಕಳುಹಿಸುವಿಕೆ. | ಸಹಕಾರ ಚುನಾವಣಾ ಪ್ರಾಧಿಕಾರದ ಸುತ್ತೋಲೆ ಕ್ರಮಾಂಕ: ಸಚುಆ/ಚುನಾವಣೆ/ಮಾಹಿತಿ/54/2014 ದಿನಾಂಕ 31-05-2014 ರಲ್ಲಿ ಸೂಚಿಸಿರುವಂತೆ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಡಿ(1) ರಡಿಯಲ್ಲಿ ಮಾಹಿತಿ ಪಡೆಯಲು ಚುನಾವಣಾಧಿಕಾರಿಗಳು ಅಗತ್ಯ ಕ್ರಮವಿಡತಕ್ಕದ್ದು. |
| 2 | ಮೊದಲ ಹಂತದಲ್ಲಿ ಪ್ರಾಥಮಿಕ ಸಂಘಗಳು /ಸಹಕಾರಿಗಳ ಆಡಳಿತ ಮಂಡಲಿಗಳ ಚುನಾವಣೆ ನಡೆಸುವ ಬಗ್ಗೆ ಚುನಾವಣಾ ಪ್ರಾಧಿಕಾರದಿಂದ ಚುನಾವಣೆ ನಡೆಸಬೇಕಾದ ಅವಧಿ / ದಿನಾಂಕಗಳ ಪ್ರಕಟಣೆ. | ಆದೇಶದಲ್ಲಿ ಚುನಾವಣಾ ದಿನಾಂಕಗಳನ್ನು ಪ್ರಕಟಿಸಿರುವಂತೆ ಚುನಾವಣಾಧಿಕಾರಿಗಳು ಸಂಬಂಧಿಸಿದವರು ಅಗತ್ಯ ಕ್ರಮವಿಡತಕ್ಕದ್ದು. |
| 3 | **ರಿಟರ್ನಿಂಗ್ ಆಫೀಸರ್ /ಸಹಾಯಕ ರಿಟರ್ನಿಂಗ್ ಆಫೀಸರ್‌ಗಳ ನೇಮಕ–**<br><br>ದಿನಾಂಕ 01.01.2018 ರಿಂದ 31.12.2018 ರವರೆಗೆ ಮಂಡಲಿಯ ಅವಧಿ ಮುಗಿಯುವ ಸಂಘಗಳು / ಸಹಕಾರಿಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ಚುನಾವಣೆ / ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ನಡೆಸಲು. | ಪ್ರತಿ ಸಹಕಾರ ಸಂಘಕ್ಕೆ / ಸಹಕಾರಿಗೆ ರಿಟರ್ನಿಂಗ್ ಆಫೀಸರ್ (ಆರ್.ಓ) ಅಗತ್ಯಕ್ಕನುಗುಣವಾಗಿ ಸಹಾಯಕ ರಿಟರ್ನಿಂಗ್ ಆಫೀಸರ್ (ಎ.ಆರ್.ಓ) ನೇಮಕಾತಿ ಮಾಡಿ ನಿಯಮಾನುಸಾರ ಚುನಾವಣೆ ನಡೆಸಲು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು. (ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಇ) |
| 4 | **ಮತದಾರರ ಪಟ್ಟಿಯನ್ನು ಸಿದ್ದಪಡಿಸುವಿಕೆ –ವೇಳಾಪಟ್ಟಿ ಪ್ರಕಟಣೆ.**<br>**ಪ್ರತಿ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕನು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಜವಾಬ್ದಾರಿಗಳು.**<br>I. ಚುನಾವಣೆಯಲ್ಲಿ ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡು ಪಟ್ಟಿ ಸಿದ್ದಪಡಿಸಿ ಸಲ್ಲಿಸುವಿಕೆ.<br>II. ಅಂತಿಮ ಮತದಾರರ ಪಟ್ಟಿಯ ಪ್ರಕಟಣೆಗೆ ಸಿದ್ದಪಡಿಸಿದ ದಿನಾಂಕದ ಪೂರ್ವದಲ್ಲಿ ಮರುಪಾವತಿಗೆ ಬಾಕಿಯಾಗುವ ಸದಸ್ಯರ ಕರಡುಪಟ್ಟಿ ಸಿದ್ದಪಡಿಸುವಿಕೆ.<br>III.ಸುಸ್ತಿದಾರರ ಕರಡು ಪಟ್ಟಿ ಸಿದ್ದಪಡಿಸಿ ಸಲ್ಲಿಸುವಿಕೆ.<br>IV.ಅನರ್ಹತೆಗೆ ಕಾರಣಗಳನ್ನು ಸದಸ್ಯವಾರು ತೋರಿಸಿ, ಸಾಮಾನ್ಯ ಚುನಾವಣೆಯಲ್ಲಿ ಮತದಾನದ ಹಕ್ಕನ್ನು ಹೊಂದಿರದ, ಇತರ ಸದಸ್ಯರ ಕರಡುಪಟ್ಟಿ ತಯಾರಿಸಿ ಸಲ್ಲಿಸುವಿಕೆ. | ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಸಿ(2) ಮತ್ತು ನಿಯಮ-13ಡಿ(4)(5) ಹಾಗೂ ಕರ್ನಾಟಕ ಸೌಹಾರ್ಧ ಸಹಕಾರಿ ನಿಯಮಗಳು 2004ರ ನಿಯಮ-5ಬಿ(1)ಗಳ ಅವಕಾಶಗಳಂತೆ ಚುನಾವಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು. |

| | | |
|---|---|---|
| | [ಕರ್ನಾಟಕ ಸಹಕಾರ ಸಂಘಗಳ ನಿಯಮ-13ಡಿ(5) ರಂತೆ ಚುನಾವಣಾ ದಿನಾಂಕದ ಪೂರ್ವದ ಕನಿಷ್ಠ 60 ದಿವಸಗಳ ಮುಂಚೆ] | |
| 5 | ಸಹಕಾರ ಚುನಾವಣಾ ಪ್ರಾಧಿಕಾರದ ಪರವಾಗಿ ಚುನಾವಣಾಧಿಕಾರಿಯು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಜವಾಬ್ದಾರಿಗಳು.<br>I. ಮತ ನೀಡುವ ಹಕ್ಕುಳ್ಳ ಸದಸ್ಯರ ಕರಡುಪಟ್ಟಿ, ಸುಸ್ತಿದಾರರ ಕರಡುಪಟ್ಟಿ ಹಾಗೂ ಅಂತಿಮ ಮತದಾರರ ಪಟ್ಟಿಯ ಪ್ರಕಟಣೆಗೆ ನಿಗಧಿಪಡಿಸಿದ ದಿನಾಂಕದ ಪೂರ್ವದಲ್ಲಿ ಮರುಪಾವತಿಗೆ ಬಾಕಿಯಾಗುವ ಸದಸ್ಯರ ಕರಡು ಪಟ್ಟಿಗಳನ್ನು ಪ್ರಕಟಿಸಲು ವ್ಯವಸ್ಥೆಗೊಳಿಸುವಿಕೆ.<br>II. ಕರಡುಪಟ್ಟಿ ಪ್ರಕಟಣೆಯಾದ ನಂತರ ಅವುಗಳಿಂದ ಬಾಧಿತರಾದವರು ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಸಲ್ಲಿಸಲು ಮತ್ತು ಸಾಮಾನ್ಯ ಚುನಾವಣೆಯ ಪೂರ್ವದ ಕನಿಷ್ಠ 15 ದಿನಗಳ ಮುಂಚಿತವಾಗಿ ಸುಸ್ತಿದಾರರು ಸಂಬಂಧಪಟ್ಟ ಸಹಕಾರ ಸಂಘಗಳಿಗೆ ಬಾಕಿಯನ್ನು ಮರುಪಾವತಿಸಲು ತಿಳಿಸುವಿಕೆ.<br>III. ಅಂತಿಮ ಅರ್ಹ ಮತದಾರರ ಪಟ್ಟಿಯನ್ನು ಪ್ರಕಟಿಸುವಿಕೆ. | ಚುನಾವಣಾ ದಿನಾಂಕಕ್ಕೆ ಪೂರ್ವದ ಕನಿಷ್ಠ 45 ದಿನಗಳ ಮುಂಚಿತವಾಗಿ ಪ್ರಕಟಿಸುವ ವ್ಯವಸ್ಥೆ ಮಾಡುವುದು.<br>ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 13ಡಿ(3)(ಎ) ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ-5(ಎ)<br>ಕರ್ನಾಟಕ ಸಹಕಾರ ಸಂಘಗಳ ನಿಯಮಗಳು-1960ರ ನಿಯಮ 13ಡಿ(3)(ಬಿ) ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 5(ಬಿ)ಗಳ ಅವಕಾಶದಂತೆ ಚುನಾವಣಾ ದಿನಾಂಕಕ್ಕೆ ಪೂರ್ವದ 15ನೇ ದಿನದಂದು ಅಥವಾ ಮುಂಚಿತವಾಗಿ ಪ್ರಕಟಿಸತಕ್ಕದ್ದು. |
| 6 | ರಿಟರ್ನಿಂಗ್ ಅಧಿಕಾರಿಯು ಚುನಾವಣಾಧಿಕಾರಿಗಳೊಂದಿಗೆ ಸಮಾಲೋಚಿಸಿ ಮತದಾನ ಕೇಂದ್ರಗಳನ್ನು ಗುರುತಿಸುವಿಕೆ ಮತ್ತು ಅದರ ವಿವರಗಳನ್ನು ಸಿದ್ಧಪಡಿಸುವುದು. | ಕರ್ನಾಟಕ ಸಹಕಾರ ಸಂಘಗಳ ನಿಯಮಗಳು-1960ರ ನಿಯಮ 13ಇ(2)(ii) ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ-5ಸಿ(2)(ii) ಮತ್ತು (iii) ರಂತೆ |
| 7 | ಮತದಾನ ಸಿಬ್ಬಂದಿ ಪಟ್ಟಿ ತಯಾರಿಸಿಕೊಂಡು ಅಗತ್ಯಕ್ಕನುಗುಣವಾಗಿ ಚುನಾವಣಾಧಿಕಾರಿ (ಪ್ರಿಸೈಂಡಿಂಗ್) ಮತ್ತು ಚುನಾವಣಾ ಸಿಬ್ಬಂದಿ ನೇಮಕಾತಿ ಮಾಡಲು ಕ್ರಮವಿಡುವುದು. | ಕರ್ನಾಟಕ ಸಹಕಾರ ಸಂಘ ನಿಯಮಗಳು 1960ರ ನಿಯಮ-13ಎಫ್ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ-5ಡಿ(1) ರಂತೆ. |
| 8 | ಸಾಮಾನ್ಯ ಚುನಾವಣೆಗಾಗಿ ಅಧಿಸೂಚನೆ ಹೊರಡಿಸುವ ಬಗ್ಗೆ ಚುನಾವಣಾಧಿಕಾರಿಗೆ ಚುನಾವಣಾ ಪ್ರಾಧಿಕಾರ ಅನುಮತಿಸಿದೆ. | ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ 14 ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ-5ಇ ಮೇರೆಗೆ ಕ್ರಮವಾಗಿ ನಮೂನೆ-XI ಹಾಗೂ ನಮೂನೆ-1ಎ ನಲ್ಲಿ ಅಧಿಸೂಚನೆಯನ್ನು ಹೊರಡಿಸತಕ್ಕದ್ದು. |
| 9 | ರಿಟರ್ನಿಂಗ್ ಆಫೀಸರ್ ಉದ್ದೇಶಿತ ಚುನಾವಣೆಗಾಗಿ ನಮೂನೆ-XII ರಲ್ಲಿ ಸಾರ್ವಜನಿಕ ನೋಟೀಸ್ ನೀಡುವುದು ಮತ್ತು ಕಛೇರಿಯ | ಕರ್ನಾಟಕ ಸಹಕಾರ ಸಂಘ ನಿಯಮಗಳು 1960ರ ನಿಯಮ-14(3)(ಎ) ರೀತ್ಯಾ ನಮೂನೆ-XII ರಲ್ಲಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು |

| | | |
|---|---|---|
| | ಸೂಚನಾಫಲಕದಲ್ಲಿ ಮತ್ತು ಸಹಕಾರ ಸಂಘದ ಕಛೇರಿ ಹಾಗೂ ಅವಶ್ಯಕವೆನಿಸಿದ ಇತರೆ ಸ್ಥಳಗಳಲ್ಲಿ ಪ್ರದರ್ಶಿಸಿಸುವುದು. | 2004ರ ನಿಯಮ 5ಇ(3)ರ ರೀತ್ಯಾ ನಮೂನೆ-2ಎ ದಲ್ಲಿ ಹೊರಡಿಸತಕ್ಕದ್ದು. |
| 10 | ಮಾದರಿ ನೀತಿ ಸಂಹಿತೆ | ಮಾದರಿ ನೀತಿ ಸಂಹಿತೆಯನ್ನು ಸಹಕಾರ ಚುನಾವಣಾ ಆಯೋಗವು ಈಗಾಗಲೇ ಪತ್ರ ಸಂಖ್ಯೆ:ಸಚುಆ/17/ ನೀತಿಸಂಹಿತೆ/2013-14, ದಿನಾಂಕ: 03.08.2013 ಹಾಗೂ ದಿನಾಂಕ: 21.09.2013ರಲ್ಲಿ ಪ್ರಕಟಿಸಿರುವಂತೆ ಚುನಾವಣಾ ಪ್ರಕ್ರಿಯೆ ಅಂತ್ಯಗೊಳ್ಳುವವರೆಗೆ ಜಾರಿಯಲ್ಲಿರುತ್ತದೆ. |
| 11 | ರಿರ್ಟನಿಂಗ್ ಆಫೀಸರ್ ಸಹಕಾರ ಸಂಘಗಳ ಆಡಳಿತ ಮಂಡಲಿಗೆ ಸಾಮಾನ್ಯ ಚುನಾವಣೆ ಮುಗಿದ ನಂತರ ಪದಾಧಿಕಾರಿಗಳ ಆಯ್ಕೆಗೆ ಚುನಾವಣೆಯನ್ನು ನಡೆಸುವುದು. | ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ನಿಯಮ-14ಎಜಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004ರ ನಿಯಮ-6ರ ಅವಕಾಶಗಳಂತೆ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸತಕ್ಕದ್ದು |

## ಚುನಾವಣೆ ಪೂರ್ವದಲ್ಲಿ ಕೈಗೊಳ್ಳಬೇಕಾದ ಕ್ರಮಗಳು.

| ಕ್ರಮ ಸಂಖ್ಯೆ | ವಿಷಯ | ಸುತ್ತೋಲೆ / ಪತ್ರಗಳ ಕ್ರಮಸಂಖ್ಯೆ ಮತ್ತು ದಿನಾಂಕ |
|---|---|---|
| 01 | ಸಹಕಾರ ಸಂಘಗಳ / ಸಹಕಾರಿಗಳ / ಪದಾಧಿಕಾರಿಗಳ ಸ್ಥಾನಕ್ಕೆ ಚುನಾವಣೆ ನಡೆಸುವ ಬಗ್ಗೆ ಚುನಾವಣಾಧಿಕಾರಿಗಳು ಕಾನೂನಿಗನುಗುಣವಾಗಿ ಕಾರ್ಯನಿರ್ವಹಿಸುವ ಕುರಿತು. | ಸಂಖ್ಯೆ :ಸಚುಆ/ಚುನಾವಣೆ/15/2013-14 ದಿನಾಂಕ : 26-07-2013ರ ಪತ್ರದಲ್ಲಿನ ಕ್ರಮ ಸಂಖ್ಯೆ 01 ರಿಂದ 10 ರಂತೆ ಕ್ರಮವಿಡುವುದು. ಸೂಚನೆಗಳಲ್ಲಿ ರಿರ್ಟನಿಂಗ್ ಆಫೀಸರ್ / ಅಧೀಕ್ಷಾಧಿಕಾರಿಗಳು / ನೌಕರರಿಗೆ ತರಬೇತಿ ಕುರಿತು ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. |
| 02 | ಸಹಕಾರ ಸಂಘಗಳ / ಸೌಹಾರ್ದ ಸಹಕಾರಿಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸುವ ಬಗ್ಗೆ ರಿರ್ಟನಿಂಗ್ ಆಫೀಸರ್‌ಗಳಿಗೆ ನೀಡಲಾದ ಮಾರ್ಗಸೂಚಿಗಳು. | ಸುತ್ತೋಲೆ ಸಂಖ್ಯೆ : ಸಚುಆ/16/2013-14 ದಿನಾಂಕ: 05-08-2013 ರಂತೆ ಕ್ರಮವಿಡತಕ್ಕದ್ದು. |
| 03 | ಸಹಕಾರ ಸಂಘಗಳ / ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಗೆ ಚಿಹ್ನೆಗಳ ಹಂಚಿಕೆ ಕುರಿತು. | ಸಂಖ್ಯೆ : ಸಚುಆ/18/ಚಿಹ್ನೆ/2013-14 ದಿನಾಂಕ : 06-08-2013 ರಲ್ಲಿ ನೀಡಿರುವ ಸೂಚನೆಯಂತೆ ಕ್ರಮವಿಡತಕ್ಕದ್ದು. |
| 04 | ಸಹಕಾರ ಸಂಘಗಳ ಪದಾಧಿಕಾರಿಗಳ ಚುನಾವಣೆ ನಡೆಸುವ ಕುರಿತು. | ಸುತ್ತೋಲೆ ಸಂಖ್ಯೆ : ಸಚುಆ/ಪ.ಚು/27/2013-14<br>ದಿನಾಂಕ:27-09-2013ರಲ್ಲಿ ನೀಡಿರುವ ಸೂಚನೆಯಂತೆ ಕ್ರಮವಿಡತಕ್ಕದ್ದು. |
| 05 | ಸಹಕಾರ ಸಂಘಗಳ / ಸಹಕಾರಿಗಳ ಆಡಳಿತ ಮಂಡಲಿ/ಪದಾಧಿಕಾರಿಗಳ ಚುನಾವಣೆಗೆ – ಸಂಘಗಳ /ಸಹಕಾರಿಗಳ ಆಡಳಿತ ಮಂಡಳಿಗಳ ಮುಖ್ಯ ಕಾರ್ಯನಿರ್ವಾಹಕರುಗಳು ಕಾನೂನಿಗನುಗುಣವಾಗಿ ಕೈಗೊಳ್ಳಬಹುದಾದ ಅಗತ್ಯ ಕ್ರಮವಿಡುವ ಅಂಶಗಳನ್ನು ಆಡಳಿತ ಮಂಡಲಿ ಅವಗಾಹನೆಗೆ ಮಂಡಿಸುವ ಕುರಿತು. | ಸುತ್ತೋಲೆ ಸಂಖ್ಯೆ : ಸಚುಆ/ಚುನಾವಣೆ/34/2013-14 ದಿನಾಂಕ : 11-11-2013 ರಂತೆ ಕ್ರಮವಿಡತಕ್ಕದ್ದು. |
| 06 | ಸಹಕಾರ ಚುನಾವಣಾ ಆಯೋಗವು ನಡೆಸುವ ಸಹಕಾರ ಸಂಘಗಳ/ಸಹಕಾರಿಗಳ ಚುನಾವಣೆಗೆ ಪೊಲೀಸ್ ಸಿಬ್ಬಂದಿಯನ್ನು ಒದಗಿಸುವಿಕೆ –ಬಂದೋಬಸ್ತ್ ಕರ್ತವ್ಯದ ಸಂಬಂಧ ಶುಲ್ಕ ಪಾವತಿ ದರವನ್ನು ನಿಗಧಿಪಡಿಸುವ ಕುರಿತು. | ಸುತ್ತೋಲೆ ಸಂಖ್ಯೆ : ಸಚುಆ/ಚುನಾವಣೆ/8/2014 ದಿನಾಂಕ : 18-03-2014 ರಂತೆ ಕ್ರಮವಿಡತಕ್ಕದ್ದು. |

## ಚುನಾವಣೆ ನಂತರದಲ್ಲಿ ಕೈಗೊಳ್ಳಬೇಕಾದ ಕ್ರಮಗಳು.

| ಕ್ರಮ ಸಂಖ್ಯೆ | ವಿಷಯ | ಸುತ್ತೋಲೆ / ಪತ್ರಗಳ ಕ್ರಮಸಂಖ್ಯೆ ಮತ್ತು ದಿನಾಂಕ |
|---|---|---|
| 01 | ಚುನಾವಣೆಗೆ ಸಂಬಂಧಪಟ್ಟ ಕಾಗದ ಪತ್ರಗಳ ವಿಲೇವಾರಿ ಕುರಿತು. | ಸುತ್ತೋಲೆ ಸಂಖ್ಯೆ : ಸಚುಅ/16/2013-14 ದಿನಾಂಕ 12-08-2013 ರಂತೆ ಕ್ರಮವಿಡತಕ್ಕದ್ದು. |

ಜಿಲ್ಲಾ ಉಪ ನಿಬಂಧಕರು, ಚುನಾವಣಾಧಿಕಾರಿ, ಉಪವಿಭಾಗೀಯ ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಹಾಗೂ ಇಲಾಖಾ ಕ್ಷೇತ್ರಾಧಿಕಾರಿಗಳು ಪ್ರಾಥಮಿಕ ಸಂಘಗಳು/ಸಹಕಾರಿಗಳ ಮತದಾರರ ಪಟ್ಟಿಗೆ ಸಿದ್ದಪಡಿಸುವಿಕೆಗೆ ಸಂಬಂಧಿಸಿದಂತೆ ಸಹಕಾರ ಸಂಘಗಳ/ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕನು ಸಿದ್ದಪಡಿಸಿ ಸಲ್ಲಿಸಿದ (ಕ್ರ.ಸಂ.4ರಲ್ಲಿ ತಿಳಿಸಿರುವಂತೆ) ಕರಡು ಪಟ್ಟಿಗಳನ್ನು ಪರಿಶೀಲಿಸುವ ಸಂಬಂಧ ಪರಿಶೀಲನಾ ತಂಡಗಳನ್ನು ರಚಿಸಿ, ಸದಸ್ಯರ ಆಕ್ಷೇಪಣೆಗಳ ಬಗ್ಗೆ ಪರಿಶೀಲಿಸಿ ಅಂತಿಮ ಪಟ್ಟಿಗಳನ್ನು (ಕ್ರ.ಸಂ. 5ರಲ್ಲಿ ತಿಳಿಸಿರುವಂತೆ) ಸಿದ್ದಪಡಿಸಿ ದೃಢೀಕರಿಸಿ ಪ್ರಕಟಿಸುವ ಬಗ್ಗೆ ಅಗತ್ಯ ಕ್ರಮ ತೆಗೆದುಕೊಳ್ಳಲು ನಿರ್ದೇಶಿಸಿದೆ.

ಮೇಲೆ ವಿವರಿಸಿದಂತೆ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಮತ್ತು ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ಹಾಗೂ ಕರ್ನಾಟಕ ಸೌಹಾರ್ಧ ಸಹಕಾರಿ ಅಧಿನಿಯಮ 1997 ಮತ್ತು ಕರ್ನಾಟಕ ಸೌಹಾರ್ಧ ಸಹಕಾರಿ ನಿಯಮಗಳು 2004ರ ನಿಯಮಗಳ ಅವಕಾಶಗಳು ಹಾಗೂ ಸಹಕಾರ ಸಂಘಗಳ/ಸಹಕಾರಿಗಳ ಬೈಲಾ ಅವಕಾಶಗಳನ್ನು ಗಮನದಲ್ಲಿಟ್ಟುಕೊಂಡು ಹಂತಹಂತವಾಗಿ ಕೈಗೊಳ್ಳಬೇಕಾದ ವಿವಿಧ ಪ್ರಕ್ರಿಯೆಗಳ ಬಗ್ಗೆ ಗಮನಹರಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಚುನಾವಣಾಧಿಕಾರಿಗಳಿಗೆ ನಿರ್ದೇಶಿಸಲಾಗಿದೆ.

ಪ್ರತಿ ಅಂಶಗಳ ಬಗ್ಗೆ ಆಗಾಗ್ಗೆ ಸಂಕ್ಷಿಪ್ತವಾಗಿ ವರದಿಯನ್ನು ರಾಜ್ಯ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ಸಲ್ಲಿಸಲು ನಿರ್ದೇಶಿಸಿದೆ.

(ಎನ್.ಸಿ. ಮುನಿಯಪ್ಪ)
ಆಯುಕ್ತರು

ಕರ್ನಾಟಕ ಸರ್ಕಾರ
ಸಹಕಾರ ಚುನಾವಣಾ ಪ್ರಾಧಿಕಾರ

ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಡಿಸೆಂಬರ್/06/2017

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027
ದಿನಾಂಕ: 10.10.2017

## ತಿದ್ದುಪಡಿ ಅಧಿಸೂಚನೆ

**ವಿಷಯ:-** ದಿನಾಂಕ:01.01.2018 ರಿಂದ 31.12.2018 ರವರೆಗೆ ಅವಧಿ ಮುಗಿಯಲಿರುವ ಪ್ರಾಥಮಿಕ ಸಹಕಾರ ಸಂಘಗಳ ಮತ್ತು ಸಹಕಾರಿಗಳ ಆಡಳಿತ ಮಂಡಲಿಗೆ ಚುನಾವಣೆ ಹಾಗೂ ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆಗಳನ್ನು ನಡೆಸಲು ಹೊರಡಿಸಲಾಗಿದ್ದ ಅಧಿಸೂಚನೆಯನ್ನು ತಿದ್ದುಪಡಿ ಮಾಡುವ ಬಗ್ಗೆ.

**ಉಲ್ಲೇಖ:-**
1. ಸಹಕಾರ ಚುನಾವಣಾ ಪ್ರಾಧಿಕಾರದ ಅಧಿಸೂಚನೆ ಸಂಖ್ಯೆ: ಸಚುಪ್ರಾ/ಚುನಾವಣೆ/ಜನವರಿ-ಡಿಸೆಂಬರ್/06/2017 ದಿನಾಂಕ:01.08.2017
2. ವಿಶೇಷ ರಾಜ್ಯ ಪತ್ರಿಕೆ ಅಧಿಸೂಚನೆ ಸಂಖ್ಯೆ: ಸಿಒ 123 ಸಿಎಲ್ಎಮ್ 2016 ದಿನಾಂಕ:29.07.2017

***

ಸರ್ಕಾರದಿಂದ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ಗಳಿಗೆ, ಉಲ್ಲೇಖ(2)ರ ವಿಶೇಷ ರಾಜ್ಯ ಪತ್ರದ ಅಧಿಸೂಚನೆ ಸಂಖ್ಯೆ ಸಿಒ 123 ಸಿಎಲ್ಎಮ್ 2016 ದಿನಾಂಕ:29.07.2017ರಲ್ಲಿ ತಿದ್ದುಪಡಿ ಮಾಡಲಾಗಿದೆ. ಅದರಂತೆ ಸಹಕಾರ ಚುನಾವಣಾ ಪ್ರಾಧಿಕಾರದಿಂದ ಉಲ್ಲೇಖ(1)ರಲ್ಲಿ ಈಗಾಗಲೇ ಹೊರಡಿಸಿರುವ ಅಧಿಸೂಚನೆಯಲ್ಲಿನ ಕ್ರಮಸಂಖ್ಯೆ (2)ರ ಹಾಗೂ ಅನುಬಂಧ-02ರ ಕ್ರಮಸಂಖ್ಯೆ 5(1)ರಲ್ಲಿನ ವಿಷಯಕ್ಕೆ ಈ ಕೆಳಗಿನಂತೆ ತಿದ್ದುಪಡಿ ಮಾಡಿದೆ.

| ಕ್ರ.ಸಂ. | ದಿನಾಂಕ:01.08.2017ರಲ್ಲಿ ಹೊರಡಿಸಿರುವ ಅಧಿಸೂಚನೆ/ಅನುಬಂಧದಲ್ಲಿರುವುದು | ಮಾಡಲಾದ ತಿದ್ದುಪಡಿ |
|---|---|---|
| 1. | ಅಧಿಸೂಚನೆಯಲ್ಲಿನ ಕ್ರ.ಸಂ. (2)ರಲ್ಲಿ "ಚುನಾವಣಾ ದಿನಾಂಕಕ್ಕೆ 45 ದಿನಗಳ ಪೂರ್ವದಲ್ಲಿ ಹೊರಡಿಸತಕ್ಕ ಕರಡು ಮತದಾರರ ಪಟ್ಟಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು" | "ಚುನಾವಣಾ ದಿನಾಂಕಕ್ಕೆ **50** ದಿನಗಳ ಪೂರ್ವದಲ್ಲಿ ಹೊರಡಿಸತಕ್ಕ ಕರಡು ಮತದಾರರ ಪಟ್ಟಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು" |
| 2. | ಅನುಬಂಧ-02 ಕ್ರ.ಸಂ. 5(1)(ಷರಾ)ದಲ್ಲಿ "ಚುನಾವಣಾ ದಿನಾಂಕಕ್ಕೆ ಪೂರ್ವದ ಕನಿಷ್ಟ 45 ದಿನಗಳ ಮುಂಚಿತವಾಗಿ ಪ್ರಕಟಿಸುವ ವ್ಯವಸ್ಥೆ ಮಾಡುವುದು." | "ಚುನಾವಣಾ ದಿನಾಂಕಕ್ಕೆ ಪೂರ್ವದ ಕನಿಷ್ಟ **50** ದಿನಗಳ ಮುಂಚಿತವಾಗಿ ಪ್ರಕಟಿಸುವ ವ್ಯವಸ್ಥೆ ಮಾಡುವುದು." |

ಉಳಿದಂತೆ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

----2

ಉಲ್ಲೇಖ(2)ರ ಅಧಿಸೂಚನೆಯನ್ವಯ ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960ರ ತಿದ್ದುಪಡಿ 2017ರಲ್ಲಿ ಸೂಚಿಸಿರುವ ಇನ್ನಿತರೆ ತಿದ್ದುಪಡಿಗಳನ್ನು ಅಳವಡಿಸಿಕೊಂಡು ಚುನಾವಣೆಗಳನ್ನು ನಡೆಸುವುದು.

(ಎನ್.ಸಿ. ಮುನಿಯಪ್ಪ)
ಆಯುಕ್ತರು,
ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು

ಇವರಿಗೆ:-

1. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತು ಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
2. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು,
3. ಸಹಕಾರ ಸಂಘಗಳ ಜಂಟಿ ನಿಬಂಧಕರು(ಪಟ್ಟಣ ಬ್ಯಾಂಕುಗಳ ವಿಭಾಗ), (ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು
4. ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಬೆಳಗಾವಿ
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ
6. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪನಿಬಂಧಕರು,

ಪ್ರತಿಗಳು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-1
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-52
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
4. ರಾಜ್ಯದ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ
5. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ